# ಕರ್ನಾಟಕ ಸರ್ಕಾರದ
# ಶಾಲಾ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು

ಸಂಖ್ಯೆ: E-1917485 DPI-CPI0C7-3(OT)/3/2025 ದಿನಾಂಕ:20-11-2025

::ಸುತ್ತೋಲೆ::

ವಿಷಯ: ವಿದ್ಯಾರ್ಥಿಗಳ ವರ್ಗಾವಣೆ ಪ್ರಮಾಣ ಪತ್ರವನ್ನು ಸಕಾಲದಲ್ಲಿ ವಿತರಿಸುವ ಬಗ್ಗೆ.

ಉಲ್ಲೇಖ: 1. ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗಗಳ ಕಾಯ್ದೆ-2005.

2. ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ-2009

3. ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಮನವಿಯ ಮೇರೆಗೆ.

* * *

ರಾಜ್ಯದಲ್ಲಿನ ಖಾಸಗಿ ಅನುದಾನಿತ ಮತ್ತು ಅನುದಾನರಹಿತ ಶಾಲೆಗಳಲ್ಲಿನ ವಿದ್ಯಾರ್ಥಿಗಳ ವರ್ಗಾವಣೆ ಪ್ರಮಾಣ ಪತ್ರವನ್ನು ಸಕಾಲದಲ್ಲಿ ವಿತರಿಸದೇ ಕಾಲಹರಣ ಮಾಡಿರುವ ಹಿನ್ನಲೆಯಲ್ಲಿ ವಿದ್ಯಾರ್ಥಿಗಳು ಅಧಿಕೃತವಾಗಿ ಶಾಲೆಗೆ ದಾಖಲಾಗದೇ ಶೈಕ್ಷಣಿಕ ಪ್ರಗತಿಗೆ ಅಡ್ಡಿಯಾಗಿ ಆತಂಕದಲ್ಲಿ ಸಿಲುಕಿ, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗಕ್ಕೆ ಹಲವಾರು ದೂರು ಸಲ್ಲಿಸಿರುವ ಅಂಶವನ್ನು ಗಂಭೀರವಾಗಿ ಪರಿಗಣಿಸಿ, ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗಗಳ ಕಾಯ್ದೆ-2005ರ ಸೆಕ್ಷನ್ 13(ಜೆ) ರಡಿಯಲ್ಲಿ ಮಕ್ಕಳ ಹಕ್ಕುಗಳ ಉಲ್ಲಂಘನೆಯ ಪ್ರಕರಣಗಳಲ್ಲಿ ದೂರುಗಳನ್ನು ಆಯೋಗವು ಸ್ವೀಕರಿಸಿ, ವಿಚಾರಣೆ ನಡೆಸುತ್ತಿದೆ.

ವಿದ್ಯಾರ್ಥಿಗಳ ವರ್ಗಾವಣೆ ಪತ್ರ ವಿತರಣೆ ಸಂಬಂಧ ರಾಷ್ಟ್ರದ ವಿವಿಧ ರಾಜ್ಯಗಳ ರಾಜ್ಯ ಉಚ್ಛನ್ಯಾಯಾಲಯಗಳಲ್ಲಿ ದಾಖಲಾಗಿರುವ ದಾವೆಗಳ ತೀರ್ಪಿನ ಅಡಿಯಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಯಿಂದ ವಂಚಿತರಾಗದಂತೆ, ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳನ್ನು ಮುಂದುವರೆಸಲು ಪೋಷಕರು ಬಯಸಿದಲ್ಲಿ "ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ-2009" ಸೆಕ್ಷನ್ 5(1)ರ ಉಲ್ಲಂಘನೆಯಾಗದಂತೆ, ಅರ್ಜಿ ಸಲ್ಲಿಸಿದ 15 ದಿನಗಳ ಒಳಗಾಗಿ ವರ್ಗಾವಣೆ ಪತ್ರವನ್ನು ವಿತರಿಸುವುದು ಶಾಲಾ ಮುಖ್ಯಸ್ಥರ ಆದ್ಯ ಕರ್ತವ್ಯವಾಗಿರುತ್ತದೆ.

ಶಾಲಾ ಮುಖ್ಯಸ್ಥರು ಸಕಾಲದಲ್ಲಿ ವರ್ಗಾವಣೆ ಪತ್ರವನ್ನು ವಿತರಿಸದಿದ್ದಲ್ಲಿ ಪೋಷಕರು ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮನವಿ ಸಲ್ಲಿಸತಕ್ಕದ್ದು. ಮನವಿ ಸ್ವೀಕರಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸದರಿ ಶಾಲಾ ಮುಖ್ಯಸ್ಥರಿಗೆ ಒಂದು ವಾರ ಕಾಲಾವಕಾಶ ನೀಡಿ, ಮನವಿಯನ್ನು ಇತ್ಯರ್ಥಪಡಿಸಲು ಕ್ರಮವಹಿಸತಕ್ಕದು.

ಕ್ಷೇತ್ರ ಶಿಕ್ಷಣಾಧಿಕಾರಿಗಳು ನೀಡಿದ ಕಾಲಾವಧಿಯಲ್ಲಿ ವರ್ಗಾವಣೆ ಪತ್ರವನ್ನು ವಿತರಿಸಲು ಶಾಲೆಯು ವಿಫಲವಾದಲ್ಲಿ, ಸಂಬಂಧಪಟ್ಟ ಶಾಲಾ ಆಡಳಿತ ಮಂಡಳಿ ಮತ್ತು ಶಾಲಾ ಮುಖ್ಯಸ್ಥರ ವಿರುದ್ಧ ಕರ್ನಾಟಕ ಶಿಕ್ಷಣ ಕಾಯ್ದೆ-1983ರ ಸೆಕ್ಷನ್ 106(2)(ಬಿ)ರಡಿ ಸಕ್ಷಮ ಪ್ರಾಧಿಕಾರಿಗಳಾದ ಜಿಲ್ಲಾ ಉಪನಿರ್ದೇಶಕರು(ಆಡಳಿತ) ರವರು ಕ್ರಮವಹಿಸಿ, ಮಕ್ಕಳ ಶೈಕ್ಷಣಿಕ ಚಟುವಟಿಕೆಗಳಿಂದ ವಂಚಿತರಾಗದಂತೆ ಕ್ರಮವಹಿಸಲು ಸೂಚಿಸಿದೆ.

ಆಯುಕ್ತರು,
ಶಾಲಾ ಶಿಕ್ಷಣ ಇಲಾಖೆ

ರವರಿಗೆ:-

ರಾಜ್ಯದ ಎಲ್ಲಾ ಖಾಸಗಿ ಅನುದಾನಿತ ಮತ್ತು ಅನುದಾನರಹಿತ ಶಾಲಾ ಮುಖ್ಯಸ್ಥರಿಗೆ.

ಪ್ರತಿಯನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕರ್ನಾಟಕ ಸರ್ಕಾರ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಅಧ್ಯಕ್ಷರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಕೃಷಿ ಭವನ, ನೃಪತುಂಗ ರಸ್ತೆ, ಬೆಂಗಳೂರು ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ ವಿಭಾಗ ಮತ್ತು ಕಲಬುರಗಿ ವಿಭಾಗ.
4. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ, ಇವರಿಗೆ ಕಳುಹಿಸುತ್ತಾ ಸದರಿ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಎಲ್ಲಾ ಶಾಲಾ ಮುಖ್ಯಸ್ಥರುಗಳಿಗೆ ಸೂಕ್ತ ನಿರ್ದೇಶನ ನೀಡಲು ಅಗತ್ಯ ಕ್ರಮವಹಿಸಲು ಸೂಚಿಸಿದೆ.

Scanned with OKEN Scanner

5. ರಾಜ್ಯದ ಎಲ್ಲಾ ತಾಲ್ಲೂಕು/ವಲಯಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಕಳುಹಿಸುತ್ತಾ, ನಿಮ್ಮ ಆಡಳಿತ ವ್ಯಾಪ್ತಿಯ ಎಲ್ಲಾ ಶಾಲಾ ಮುಖ್ಯಸ್ಥರುಗಳಿಗೆ ಸದರಿ ಸುತ್ತೋಲೆಯನ್ನು ಕಳುಹಿಸಿ, ಸುತ್ತೋಲೆಯಲ್ಲಿನ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಕ್ತ ಕ್ರಮವಹಿಸಲು ಸೂಚಿಸಿದೆ.
6. ಈ ಕಛೇರಿಯ ಇ-ಆಡಳಿತ ವಿಭಾಗಕ್ಕೆ, ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದಕ್ಕಾಗಿ.
7. ಕಛೇರಿಯ ಕಡತಕ್ಕಾಗಿ.

Scanned with OKEN Scanner

ಕರ್ನಾಟಕ ಸರ್ಕಾರ

**ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ**

4ನೇ ಮಹಡಿ, ಕೃಷಿ ಭವನ, ನೃಪತುಂಗ ರಸ್ತೆ, ರಾಣಿ ಚೆನ್ನಮ್ಮ ವೃತ್ತ, ಬೆಂಗಳೂರು– 560 001

ದೂರವಾಣಿ ಸಂಖ್ಯೆ: 080–22115290 E-mail: kscpcr@gmail.com

**ಡಾ. ತಿಪ್ಪೇಸ್ವಾಮಿ ಕೆ.ಟಿ.** ಸದಸ್ಯರು E-mail: thippeswamykscpcr@gmail.com


ಇವರಿಗೆ ದಿನಾಂಕ: 23–08–2025

**ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ,
ಕರ್ನಾಟಕ ಸರ್ಕಾರ.

**ಮಾನ್ಯರೇ,**

**ವಿಷಯ: ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ವರ್ಗಾವಣೆ ಪತ್ರಗಳನ್ನು ತಡೆಹಿಡಿಯುವ ಮೂಲಕ ಮಕ್ಕಳ ಶಿಕ್ಷಣ ಹಕ್ಕನ್ನು ಉಲ್ಲಂಘನೆ ಮಾಡುತ್ತಿರುವ ಪ್ರಕರಣಗಳು ಹೆಚ್ಚುತ್ತಿದ್ದು ಈ ಬಗ್ಗೆ ಸೂಕ್ತ ಕ್ರಮಕೈಗೊಳ್ಳುವ ಬಗ್ಗೆ,**

ಈ ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು "ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ–2009" ಸೆಕ್ಷನ್ 31ರಡಿಯಲ್ಲಿ ಸದರಿ ಕಾಯ್ದೆಯ ಮೇಲುಸ್ತುವಾರಿ ಜವಾಬ್ದಾರಿ ನಿರ್ವಹಿಸುತ್ತದೆ. ಅಲ್ಲದೇ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗಗಳ ಕಾಯ್ದೆ–2005ರ ಸೆಕ್ಷನ್ 13(ಜೆ) ರಡಿಯಲ್ಲಿ ಮಕ್ಕಳ ಹಕ್ಕುಗಳ ಉಲ್ಲಂಘನೆಯ ಪ್ರಕರಣಗಳಲ್ಲಿ ದೂರುಗಳನ್ನು ಸ್ವೀಕರಿಸಿ ವಿಚಾರಣೆ ನಡೆಸುತ್ತದೆ.

ಹೀಗೆ ಆಯೋಗದ ಮುಂದೆ ಪ್ರತೀ ವರ್ಷ ದಾಖಲಾಗುತ್ತಿರುವ ಒಟ್ಟು ಪ್ರಕರಣಗಳಲ್ಲಿ ಶೇ 30ರಷ್ಟು ಪ್ರಕರಣಗಳು ಖಾಸಗಿ ಶಾಲೆಗಳು ವರ್ಗವಣೆ ಪತ್ರ ನೀಡದಿರುವ, ತಡೆಹಿಡಿದಿರುವ, ಮಾಹಿತಿಯನ್ನು ತಪ್ಪಾಗಿ ನಮೂದಿಸಿರುವ ಪ್ರಕರಣಗಳು ದಾಖಲಾಗುತ್ತಿವೆ. ಇದರಿಂದಾಗಿ ಮಕ್ಕಳು ತಾತ್ಕಾಲಿಕವಾಗಿ ಅಥವಾ ಶೈಕ್ಷಣಿಕ ವರ್ಷಪೂರ್ತಿ ಶಿಕ್ಷಣದಿಂದ ವಂಚಿತವಾಗುತ್ತಿರುವುದನ್ನು ಗಮನಿಸಲಾಗಿದೆ. ಇದು ಮಕ್ಕಳ ಶೈಕ್ಷಣಿಕ ಪ್ರಗತಿ ಹಾಗೂ ಮಾನಸಿಕ ಆರೋಗ್ಯದ ಮೇಲೆ ತೀವ್ರ ಪರಿಣಾಮ ಬೀರುತ್ತಿದೆ. ಈ ರೀತಿ ವರ್ಗಾವಣೆ ಪತ್ರ ತಡೆಯಿಡಿಯುವುದು "ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ–2009" ಸೆಕ್ಷನ್ 5(1) ರ ಸ್ಪಷ್ಟ ಉಲ್ಲಂಘನೆಯಾಗಿದೆ. ಅಲ್ಲದೆ ಇಂತಹ ಪ್ರಕರಣಗಳ ವಿಚಾರಣೆಗೆ ಕೈಗೆತ್ತಿಕೊಂಡು ಆಯೋಗದ ಹಾಗೂ ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳ ಸಮಯವೂ ವ್ಯರ್ಥವಾಗುತ್ತಿದೆ.

ಹಾಗಾಗಿ ತಾವು ಈ ಬಗ್ಗೆ ಅಧಿಕಾರಿಗಳಿಗೆ ಮತ್ತು ಶಾಲಾ ಮುಖ್ಯಸ್ಥರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿ ಇಂತಹ ಪ್ರಕರಣಗಳು ಮರುಕಳಿಸದಂತೆ ಹಾಗೂ ಸಂಬಂಧಿಸಿದ ಅಧಿಕಾರಿಗಳು ನಿಯಮಿತವಾಗಿ ಮೇಲ್ವಿಚಾರಣೆ ಮಾಡಲು ಸೂಕ್ತ ನಿರ್ದೇಶನ ನೀಡಬೇಕೆಂದು ಕೋರುತ್ತೇನೆ.

ವಂದನೆಗಳೊಂದಿಗೆ

ತಮ್ಮ ವಿಶ್ವಾಸಿ

**(ಡಾ. ತಿಪ್ಪೇಸ್ವಾಮಿ ಕೆ.ಟಿ.)**

**ಪ್ರತಿಯನ್ನು:**

1. ಮಾನ್ಯ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು, ಕರಾಮಹರಆ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

Scanned with OKEN Scanner